# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಅಭಿವೃದ್ಧಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1/10/2020

# ಗುಜರಾತ್ ಮಾದರಿಯಲ್ಲಿ ಬೆಂಗಳೂರು ಅಭಿವೃದ್ಧಿಗೆ ಕ್ರಮ

## ಪಿಎಂ ಸಲಹೆ ಆಧರಿಸಿ ಸಭೆ ನಡೆಸಿದ ಸಿಎಂ

■ **ವಿಕ ಸುದ್ದಿಲೋಕ** ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ಸೂಚನೆಯಂತೆ ಗುಜರಾತ್ ಮಾದರಿಯಲ್ಲಿ ಬೆಂಗಳೂರು ನಗರದ ಅಭಿವೃದ್ಧಿ ಕೈಗೊಳ್ಳಲು ಸಿಎಂ ಬಿ. ಎಸ್.ಯಡಿಯೂರಪ್ಪ ಸಭೆ ನಡೆಸಿದರು.

### ವಿಧಾನ ಸೌಧದ ಸುತ್ತ ಪ್ರವಾಸಿ ತಾಣ ನಿರ್ಮಾಣ

ಸಿಎಂ ಇತ್ತೀಚೆಗೆ ದಿಲ್ಲಿಗೆ ತೆರಳಿದ್ದಾಗ ಪ್ರಧಾನಿಯವರು ಈ ಸಂಬಂಧ ಸಲಹೆ ನೀಡಿದ್ದರು. ಜತೆಗೆ ಗುಜರಾತ್‌ನ ನಿವೃತ್ತ ಐಎಎಸ್ ಅಧಿಕಾರಿಯೊಬ್ಬರ ಸಂಪರ್ಕ ಸಂಖ್ಯೆಯನ್ನೂ ಒದಗಿಸಿದ್ದರು. ಈ ಹಿನ್ನೆಲೆಯಲ್ಲಿ ಗುಜರಾತ್‌ನ ನಿವೃತ್ತ ಅಧಿಕಾರಿಗಳೊಂದಿಗೂ ಮಾತುಕತೆ ನಡೆಸಿರುವ ಸಿಎಂ ಬಿಎಸ್‌ವೈ, ಗೃಹ ಕಚೇರಿ ಕೃಷ್ಣಾದಲ್ಲಿ ಉನ್ನತಾಧಿಕಾರಿಗಳೊಂದಿಗೆ ಬುಧವಾರ ಸಭೆ ನಡೆಸಿದರು.

ಈ ಸಭೆಯಲ್ಲಿ ಭಾಗಿಯಾದ ಖಾಸಗಿ ಆರ್ಕಿಟೆಕ್ಟ್ ಸಂಸ್ಥೆಯ ಪ್ರತಿನಿಧಿಗಳು, ಬೆಂಗಳೂರು ನಗರವನ್ನು ಹೇಗೆ ಆಕರ್ಷಣೆಗೊಳಿಸಬಹುದು ಎಂಬ ಬಗ್ಗೆ ಪವರ್ ಪಾಯಿಂಟ್ ಪ್ರೆಸೆಂಟೇಷನ್ ಕೊಟ್ಟರು. ಇದು ಪ್ರಾರಂಭಿಕ ಚರ್ಚೆಯಾಗಿದ್ದು, ಮತ್ತೊಂದು ಸಭೆ ನಡೆಸಿದ ಬಳಿಕ ಈ ಬಗ್ಗೆ ಖಚಿತ ಚಿತ್ರಣ ಲಭಿಸಲಿದೆ.

### ಏನಿದು ಯೋಜನೆ?

ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಚರ್ಚ್ ಸ್ಟ್ರೀಟ್‌ಗೆ ಹೊಸ ಸ್ವರೂಪ ಕೊಡಲಾಗಿದೆ. ಇದರಿಂದಾಗಿ ಮಹಾತ್ಮ ಗಾಂಧಿ ರಸ್ತೆ, ಚರ್ಚ್ ಸ್ಟ್ರೀಟ್‌ನಲ್ಲಿ ಪ್ರವಾಸಿ ಆಕರ್ಷಣೆ ಹೆಚ್ಚಿದೆ. ಹಾಗೆಯೇ ವಿಧಾನಸೌಧದ ಸುತ್ತಮುತ್ತಲಿನ ಸ್ಥಳಗಳಲ್ಲಿ ಪ್ರವಾಸಿ ಆಕರ್ಷಣೆ ಹೆಚ್ಚಿಸುವುದು ಹೊಸ ಯೋಜನೆಯಾಗಿದೆ. ಜತೆಗೆ ರಾಜಕಾಲುವೆಗಳನ್ನು ಅಭಿವೃದ್ಧಿಪಡಿಸಿ ಇಂತಹ ಕಾಲುವೆಗಳ ಎರಡೂ ಕಡೆ ಹಸಿರೀಕರಣ ಮಾಡುವುದೂ ಈ ಯೋಜನೆಯ ಭಾಗವಾಗಿದೆ ಎಂದು ಸಿಎಂ ಕಚೇರಿಯ ಅಧಿಕಾರಿಗಳು ತಿಳಿಸಿದ್ದಾರೆ.